ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 19/01/2020

### ಶಾಸಕಾಂಗ ಪಕ್ಷ ಹಾಗೂ ವಿರೋಧ ಪಕ್ಷದ ನಾಯಕ ಸ್ಥಾನ ಒಟ್ಟಿಗೆ ಇರಲಿ

# ಇಬ್ಭಾಗ ಬೇಡ: ಸಿದ್ದರಾಮಯ್ಯ

ಪ್ರ.ವಾ. 19/1/2020

ಪ್ರಜಾವಾಣಿ ವಾರ್ತೆ



ಬೆಂಗಳೂರು: 'ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಸ್ಥಾನ (ಸಿಎಲ್‌ಪಿ) ಹಾಗೂ ವಿರೋಧ ಪಕ್ಷದ ನಾಯಕ ಸ್ಥಾನಗಳು ಒಟ್ಟಿಗೆ ಇರಬೇಕು. ಅವು ಇಬ್ಭಾಗ ಆಗಬಾರದು. ಇದು ನನ್ನ ವೈಯಕ್ತಿಕ ಅಭಿಪ್ರಾಯ' ಎಂದು ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ತಿಳಿಸಿದರು.

ಶನಿವಾರ ಇಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,' ರಾಜ್ಯದಲ್ಲಿ ಇಲ್ಲಿಯವರೆಗೆ ಸಿಎಲ್‌ಪಿ ಹಾಗೂ ವಿರೋಧ ಪಕ್ಷ ನಾಯಕ ಸ್ಥಾನಗಳು ಬೇರೆ ಆಗಿಲ್ಲ. ಶಾಸಕಾಂಗ ಪಕ್ಷದ ನಾಯಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೇನೆ. ಹೈಕಮಾಂಡ್ ಭೇಟಿಯಾದಾಗ ರಾಜೀನಾಮೆ ವಾಪಸ್ ಪಡೆಯುವ ಬಗ್ಗೆ ಚರ್ಚೆ ನಡೆದಿಲ್ಲ. ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ಹೈಕಮಾಂಡ್‌ಗೆ ಬಿಟ್ಟ ವಿಚಾರ' ಎಂದು ಅವರು ಹೇಳಿದರು.

**ಕುಗ್ಗಿದ ಕಲಾಪಗಳ ಚರ್ಚಾ ಗುಣಮಟ್ಟ:** ಇತ್ತೀಚೆಗೆ ವಿಧಾನಸಭೆ ಕಲಾಪಗಳಲ್ಲಿನ ಚರ್ಚೆಯ ಗುಣಮಟ್ಟ ಕುಗ್ಗಿದೆ. 2018ರಲ್ಲಿ ಕೇವಲ 17 ದಿನ ಕಲಾಪ ನಡೆದಿದೆ.2019ರಲ್ಲಿ 18 ದಿನ ನಡೆದಿದೆ. ಆದರೆ, 2020ರಲ್ಲಿ ಚರ್ಚೆಯೇ ನಡೆದಿಲ್ಲ. ಪ್ರಜಾಪ್ರಭುತ್ವದಲ್ಲಿ ಇದು ಉತ್ತಮ ಬೆಳವಣಿಗೆ ಅಲ್ಲ ಎಂದು ಕಳವಳ ವ್ಯಕ್ತಪಡಿಸಿದರು.

'ರಾಜ್ಯದ ಬಜೆಟ್ ಮೊತ್ತ ₹2,34,000 ಕೋಟಿ. ಬಜೆಟ್ ಹಣ ಖರ್ಚಾಗಿರುವ ಬಗ್ಗೆ ಸುದೀರ್ಘ ಚರ್ಚೆ ನಡೆಯಬೇಕು. ಜನರ ತೆರಿಗೆ ಹಣ ಖರ್ಚಾಗಿರುವ ಬಗ್ಗೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಉತ್ತರಿಸಬೇಕು. ಆದರೆ, ಈಗಿನ ಅಧಿಕಾರಿಗಳು ಹಾಗೂ ರಾಜಕಾರಣಿಗಳು ಭಂಡರಾಗಿದ್ದಾರೆ. ಜನರ ಸಮಸ್ಯೆಗಳ ಬಗ್ಗೆ ಚರ್ಚಿಸಲು ಸರ್ಕಾರಕ್ಕೆ ಆಸಕ್ತಿ ಇಲ್ಲ. ವರ್ಷದಲ್ಲಿ ಕನಿಷ್ಠ 60 ದಿನಗಳಾದರೂ ಕಲಾಪಗಳಲ್ಲಿ ಚರ್ಚೆ ನಡೆಯಬೇಕು' ಎಂದು ಅವರು ಹೇಳಿದರು.

## 'ಸಿಎಎಗೆ ಖಜಾನೆಯೇ ಖಾಲಿ'

ಬೆಂಗಳೂರು: 'ನೆರೆ ಹಾವಳಿಗೆ ಸಮರ್ಪಕ ಪರಿಹಾರ ನೀಡದೆ ಇದ್ದರೂ ಗೃಹ ಸಚಿವ ಅಮಿತ್ ಶಾ ಶನಿವಾರ ಹುಬ್ಬಳ್ಳಿಗೆ ಬಂದಿದ್ದಾರೆ, ಸಿಎಎ, ಎನ್‌ಆರ್‌ಸಿ ಜಾರಿಯ ಬಳಿಕ ಖಜಾನೆಯಲ್ಲಿ ಹಣ ಉಳಿಯುತ್ತದೆಯೇ ಎಂಬುದನ್ನು ತಿಳಿಸಬೇಕು' ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಕೇಳಿದ್ದಾರೆ.

ಈ ಕುರಿತು ಸರಣಿ ಟ್ವೀಟ್ ಮಾಡಿರುವ ಅವರು, 'ಸಿಎಎ, ಎನ್‌ಆರ್‌ಸಿ ಮೂಲಕ ದೇಶ ಒಡೆಯುವ ಕೆಲಸಕ್ಕೆ ಸ್ವಲ್ಪ ವಿರಾಮ ನೀಡಿ, ನೆರೆ ಹಾವಳಿಯಿಂದ ಬದುಕು ಕಳೆದುಕೊಂಡು ಬೀದಿಗೆ ಬಿದ್ದಿರುವ ಸಂತ್ರಸ್ತರ ಕಡೆ ಗಮನ ಕೊಡಿ, ಮಂಗಳೂರಿನಲ್ಲಿ ನಡೆದ ನಕಲಿ ಎನ್‌ಕೌಂಟರ್ ಕುರಿತಂತೆ ಸಮರ್ಪಕವಾಗಿ ತನಿಖೆ ನಡೆಯುತ್ತಿದೆಯೇ ಎಂಬುದರ ಬಗ್ಗೆಯೂ ಕೇಂದ್ರ ಗೃಹ ಸಚಿವರ ನೆಲೆಯಲ್ಲಿ ಸ್ವಲ್ಪ ಗಮನ ಹರಿಸಿ' ಎಂದು ಕುಟುಕಿದ್ದಾರೆ.

ಮತ್ತೊಂದೆಡೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯಿಂದಲೂ (ಕೆಪಿಸಿಸಿ) ಶಾ ವಿರುದ್ಧ ಸರಣಿ ಟ್ವೀಟ್ ಮಾಡಲಾಗಿದೆ. ಸಿಎಎ, ಎನ್‌ಆರ್‌ಸಿ ವಿರೋಧಿಸಿ ದೇಶದಾದ್ಯಂತ 1 ತಿಂಗಳಿಂದ ನಿರಂತರವಾಗಿ, ಎಲ್ಲಾ ಜಾತಿ-ಧರ್ಮಗಳ ವಿದ್ಯಾರ್ಥಿಗಳು, ಯುವಕರು, ಮಹಿಳೆಯರು, ಜನಸಾಮಾನ್ಯರು ಪ್ರತಿಭಟನೆ ಮಾಡುತ್ತಿದ್ದಾರೆ. ಸಂವಿಧಾನ ಮತ್ತು ಪ್ರಜಾಪ್ರಭುತ್ವವನ್ನು ಗೌರವಿಸುತ್ತಿಲ್ಲ ಏಕೆ ಎಂಬುದಕ್ಕೆ ಶಾ ಉತ್ತರ ಕೊಡಬೇಕು ಎಂದು ಆಗ್ರಹಿಸಿದೆ.

'ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ತಕ್ಷಣ ಮಹದಾಯಿ ವಿವಾದ ಬಗೆಹರಿಯಲಿದೆ ಎಂದಿದ್ದಿರಿ, ಆದರೆ ವಿವಾದ ಬಗೆಹರಿಸುವ ಲಕ್ಷಣ ಇಲ್ಲ, ಇದು ಚುನಾವಣಾ ಕುತಂತ್ರವೇ?' ಎಂದು ಕುಟುಕಿದೆ.

4